“ಸರ್ವಶಕ್ತನಾದ ಅಲ್ಲಾಹನ ದೃಷ್ಟಿಯಲ್ಲಿ ಪ್ರಾರ್ಥನೆಗಿಂತಲೂ ಹೆಚ್ಚು ಗೌರವಾರ್ಹವಾದ ಬೇರೆ ವಿಷಯವಿಲ್ಲ.”

ಅಬೂ ಹುರೈರ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: “ಸರ್ವಶಕ್ತನಾದ ಅಲ್ಲಾಹನ ದೃಷ್ಟಿಯಲ್ಲಿ ಪ್ರಾರ್ಥನೆಗಿಂತಲೂ ಹೆಚ್ಚು ಗೌರವಾರ್ಹವಾದ ಬೇರೆ ವಿಷಯವಿಲ್ಲ.” [حسن] [رواه الترمذي وابن ماجه وأحمد]

ಪ್ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇಲ್ಲಿ ವಿವರಿಸುವುದೇನೆಂದರೆ, ಆರಾಧನೆಗಳ ಪೈಕಿ ಅಲ್ಲಾಹನ ದೃಷ್ಟಿಯಲ್ಲಿ ಪ್ರಾರ್ಥನೆಗಿಂತಲೂ ಶ್ರೇಷ್ಠವಾದ ಬೇರೆ ವಿಷಯವಿಲ್ಲ. ಏಕೆಂದರೆ, ಪ್ರಾರ್ಥಿಸುವಾಗ ಮನುಷ್ಯನು ಅಲ್ಲಾಹನ ನಿರಪೇಕ್ಷತೆಯನ್ನು ಒಪ್ಪಿಕೊಳ್ಳುತ್ತಾನೆ ಮತ್ತು ತನ್ನ ಅಸಹಾಯಕತೆಯನ್ನು ಹಾಗೂ ತಾನು ಅಲ್ಲಾಹನ ಮೇಲೆ ಅವಲಂಬಿತನಾಗಿದ್ದೇನೆಂಬುದನ್ನು ಒಪ್ಪಿಕೊಳ್ಳುತ್ತಾನೆ.

https://sunnah.global/hadeeth/kn/show/5509